ಕರ್ನಾಟಕ ಸರ್ಕಾರ

**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ.DTE-ADMIOEST(3)/34/2021

ಆಯುಕ್ತರ ಕಛೇರಿ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು-560 001,
ದಿನಾಂಕ: 04.12.2021

## ಜ್ಞಾಪನ

ವಿಷಯ: 2021-22ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಅರೆಕಾಲಿಕ ಅತಿಥಿ ಉಪನ್ಯಾಸಕರ ನೇಮಕಾತಿಗೆ ಅನುಮೋದನೆ ನೀಡುವ ಕುರಿತು.

ಉಲ್ಲೇಖ:
1. ಇಲಾಖೆಯ ಸುತ್ತೋಲೆ ಸಂಖ್ಯೆ: ಡಿಟಿಇ/1/ಇಎಸ್‌ಟಿ(2)ಬಿ/2007-08, ದಿ: 27.04.2007.
2. ಇಲಾಖೆಯ ಸುತ್ತೋಲೆ ಸಂಖ್ಯೆ: ಡಿಟಿಇ/23/ಇಎಸ್‌ಟಿ4ಎ/2009, ದಿನಾಂಕ: 16.10.2009.
3. ಇಲಾಖೆ ಸುತ್ತೋಲೆ ಸಂಖ್ಯೆ: ಡಿಟಿಇ/01/ಇಎಸ್‌ಟಿ 2(ಬಿ)/2019, ದಿನಾಂಕ: 03.09.2019.
4. ಸರ್ಕಾರಿ ಆದೇಶ ಸಂಖ್ಯೆ: ಇಡಿ/16/ಟಿಪಿಇ/2017, ದಿನಾಂಕ: 11.12.2019.
5. ಸರ್ಕಾರದ ಪತ್ರ ಸಂಖ್ಯೆ: ಇಡಿ 174 ಡಿಟಿಇ 2020, ದಿನಾಂಕ: 22.12.2020
6. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಸುತ್ತೋಲೆ ಸಂಖ್ಯೆ: ಸಿ-4(6)ಸಪ್ರೌಶಾ/ಶಾ.ಕಾ.ಪ್ರ/23/2020-21, ದಿನಾಂಕ: 16.08.2021
7. ತಾಂತ್ರಿಕ ಶಿಕ್ಷಣ ಇಲಾಖೆಯ ಜ್ಞಾಪನ ಸಂಖ್ಯೆ: DTE-ADMIOEST(3)/34/2021 ದಿ: 25.08.2021 ಮತ್ತು ದಿ: 01.10.2021.
8. ಸಂಸ್ಥೆಗಳಲ್ಲಿ ಅರೆಕಾಲಿಕ ಅತಿಥಿ ಉಪನ್ಯಾಸಕರನ್ನು ನೇಮಿಸಿಕೊಂಡಿರುವುದಕ್ಕೆ ಅನುಮೋದನೆ ನೀಡುವಂತೆ ಕೋರಿ ಸ್ವೀಕೃತವಾಗಿರುವ ಪ್ರಸ್ತಾವನೆಗಳು

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ(1), (2) ಮತ್ತು (3) ರಲ್ಲಿನ ಇಲಾಖೆಯ ಸುತ್ತೋಲೆಯಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದ ಸರ್ಕಾರಿ ಪಾಲಿಟೆಕ್ನಿಕ್ ಹಾಗೂ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಅರೆಕಾಲಿಕ ಉಪನ್ಯಾಸಕರುಗಳ ಆಯ್ಕೆ ಸಂಬಂಧ ಅನುಸರಿಸಬೇಕಾದ ಮಾರ್ಗಸೂಚಿ / ನಿಯಮಗಳನ್ನು ನೀಡಲಾಗಿದ್ದು, ಸದರಿ ಮಾರ್ಗಸೂಚಿ / ನಿಯಮಗಳ ಪ್ರಕಾರ ಅರೆಕಾಲಿಕ ಉಪನ್ಯಾಸಕರುಗಳನ್ನು ನೇಮಿಸಿಕೊಳ್ಳಲು ತಿಳಿಸುತ್ತಾ, ನಿಯಮ / ಮಾರ್ಗಸೂಚಿಗಳನ್ನು ಉಲ್ಲಂಘಿಸಿ ನೇಮಕ ಮಾಡಿಕೊಂಡಿದ್ದಲ್ಲಿ ಸಂಬಂಧಪಟ್ಟ ಪ್ರಾಂಶುಪಾಲರೇ ನೇರ ಹೊಣೆಗಾರರಾಗಿರುತ್ತಾರೆಂದು ಸೂಚಿಸಲಾಗಿರುತ್ತದೆ.

ಉಲ್ಲೇಖ(4) ರ ಸರ್ಕಾರದ ಆದೇಶ ಮತ್ತು ಉಲ್ಲೇಖ(5) ರ ಪತ್ರದಲ್ಲಿ, ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿರುವ ಸರ್ಕಾರಿ ಪಾಲಿಟೆಕ್ನಿಕ್ ಹಾಗೂ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ಉಪನ್ಯಾಸಕರ ಗರಿಷ್ಠ ಮಾಸಿಕ ಕಾರ್ಯಭಾರ 36 ಗಂಟೆಗೆ ಗರಿಷ್ಠ ಮಾಸಿಕ ಗೌರವ ಧನ ರೂ. 12,500/- ಗಳನ್ನು ಮೀರದಂತೆ ನಿಗದಿಪಡಿಸಿ ಮಂಜೂರಾತಿ ನೀಡಲಾಗಿದೆ.

ಉಲ್ಲೇಖ(6) ರಲ್ಲಿ ರಾಜ್ಯದಲ್ಲಿನ ಪ್ರೌಢ ಶಾಲೆಗಳಲ್ಲಿನ 9 ಮತ್ತು 10ನೇ ತರಗತಿ ವಿದ್ಯಾರ್ಥಿಗಳಿಗೆ ಶಾಲೆಗಳನ್ನು ಪೂರ್ಣ ಪ್ರಮಾಣದಲ್ಲಿ ದಿನಾಂಕ: 23.08.2021 ರಿಂದ ಪ್ರಾರಂಭಿಸಿ ಬೋಧನಾ ತರಗತಿಗಳನ್ನು ನಡೆಸುವ ಬಗ್ಗೆ ಮಾರ್ಗಸೂಚಿಗಳನ್ನು ನೀಡಲಾಗಿರುತ್ತದೆ.

ಉಲ್ಲೇಖ(7) ರಲ್ಲಿ, 2021-22ನೇ ಶೈಕ್ಷಣಿಕ ಸಾಲಿಗೆ ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಿಗೆ ತಿಳಿಸಿರುವ ಸಂಖ್ಯಾ ಮಾಹಿತಿಯ ಗರಿಷ್ಠ ಮಿತಿಯಲ್ಲಿ ಉಪಲಬ್ಧ ಕಾರ್ಯಭಾರದ ಅವಶ್ಯಕತೆಗೆ ಅನುಗುಣವಾಗಿ ಸಿಮೀತಗೊಳಿಸಿ ಅರೆಕಾಲಿಕ ಅತಿಥಿ ಉಪನ್ಯಾಸಕರ ಸೇವೆಯನ್ನು ಪಡೆಯಲು, ಪ್ರಾಂಶುಪಾಲರ ಹಂತದಲ್ಲಿ ಅರೆಕಾಲಿಕ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳಲು ಅನುಮತಿ ನೀಡಲಾಗಿರುತ್ತದೆ.

...2/-

ಉಲ್ಲೇಖ(8) ರಂತೆ ಸಂಸ್ಥೆಗಳಲ್ಲಿ ಅರೆಕಾಲಿಕ ಅತಿಥಿ ಉಪನ್ಯಾಸಕರನ್ನು ನೇಮಿಸಿಕೊಂಡಿರುವುದಕ್ಕೆ ಅನುಮೋದನೆ ನೀಡಿ ಭತ್ಯೆ ಮಂಜೂರಾತಿ ನೀಡುವಂತೆ ಕೋರಿ ಪ್ರಸ್ತಾವನೆ ಸಲ್ಲಿಸಲಾಗಿದೆ. ಈ ಸಂಬಂಧ 2021-22ನೇ ಶೈಕ್ಷಣಿಕ ಸಾಲಿಗೆ ಅರೆಕಾಲಿಕ ಅತಿಥಿ ಉಪನ್ಯಾಸಕರನ್ನಾಗಿ ನೇಮಿಸಿಕೊಂಡಿರುವುದಕ್ಕೆ ಕೆಳಕಂಡ ಕೋಷ್ಟಕದಲ್ಲಿ ತಿಳಿಸಿರುವಂತೆ ಅನುಮೋದನೆ ನೀಡುತ್ತಾ, ಸದರಿ ಅರೆಕಾಲಿಕ ಉಪನ್ಯಾಸಕರ ಭತ್ಯೆಯನ್ನು 2021-22ನೇ ಸಾಲಿನ **ದಿನಾಂಕ: 23.08.2021 ರಿಂದ 31.03.2022 ರವರೆಗೆ ಮಾತ್ರ ಇಲಾಖೆಯ ಲೆಕ್ಕ ಶೀರ್ಷಿಕೆ 2203-00-105-0-01-324** ಅಡಿಯಲ್ಲಿ ಭತ್ಯೆಯನ್ನು ಭರಿಸಲು ಅನುಮೋದನೆ ನೀಡಲಾಗಿದೆ.

| ಕ್ರ. ಸಂ. | ಸಂಸ್ಥೆಯ ಸಂಕೇತ | ಸಂಸ್ಥೆಯ ಹೆಸರು | ಸಂಸ್ಥೆಗೆ ಅರೆಕಾಲಿಕ ಅತಿಥಿ ಉಪನ್ಯಾಸಕರ ನೇಮಕ ಮಾಡಿಕೊಳ್ಳಲು ಅನುಮತಿ ನೀಡಿದ್ದ ಸಂಖ್ಯೆ | ಸಂಸ್ಥೆಯಲ್ಲಿ ಅರೆಕಾಲಿಕ ಅತಿಥಿ ಉಪನ್ಯಾಸಕರ ನೇಮಕಕ್ಕೆ ಅನುಮೋದನೆ ನೀಡಲಾದ ಸಂಖ್ಯೆ |
|---|---|---|---|---|
| 1 | 301 | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ, ಭಧ್ರಾವತಿ | 12 | 12 |
| 2 | 302 | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ,ಮಂಗಳೂರು | 07 | 07 |
| 3 | 303 | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ, ಬಾಗಲಕೋಟೆ | 10 | 10 |
| 4 | 304 | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ, ಹುಬ್ಬಳ್ಳಿ | 06 | 06 |
| 5 | 305 | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ, ಕಲಬುರಗಿ | 02 | 02 |
| 6 | 306 | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ, ಬಳ್ಳಾರಿ | 06 | 06 |
| | | ಒಟ್ಟು ಸಂಖ್ಯೆ | **43** | **43** |

ಷರತ್ತುಗಳು:
1) ಅರೆಕಾಲಿಕ ಉಪನ್ಯಾಸಕರಿಗೆ ಸಂಬಂಧಿಸಿದಂತೆ ಪ್ರತ್ಯೇಕವಾಗಿ ಹಾಜರಾತಿ ವಹಿಯನ್ನು ಹಾಗೂ ಬಯೋಮೆಟ್ರಿಕ್ ಹಾಜರಾತಿಯನ್ನು ಕಡ್ಡಾಯವಾಗಿ ನಿರ್ವಹಿಸತಕ್ಕದು. ಅರೆಕಾಲಿಕ ಉಪನ್ಯಾಸಕರು ಕಾರ್ಯ ನಿರ್ವಹಿಸಿದ ಅವಧಿಗೆ ಸಂಬಂಧಿಸಿದ ಮೊತ್ತವನ್ನು ಪ್ರೋರಾಟ ಆಧಾರದ ಮೇರೆಗೆ ಅರೆಕಾಲಿಕ ಭತ್ಯೆ ನೀಡತಕ್ಕದು.
2) ಅರೆಕಾಲಿಕ ಉಪನ್ಯಾಸಕರ ನೇಮಕಾತಿಯು ತಾತ್ಕಾಲಿಕವಾಗಿರುತ್ತದೆಯೆಂದೂ, ಪೂರ್ಣಾವಧಿ ಉಪನ್ಯಾಸಕರುಗಳ ನೇಮಕಾತಿಯಾದ ಕೂಡಲೇ ಸದರಿಯವರ ನೇಮಕಾತಿಯನ್ನು ರದ್ದುಪಡಿಸಲಾಗುವುದೆಂದು ಅರೆಕಾಲಿಕ ಉಪನ್ಯಾಸಕರುಗಳಿಂದ ಮುಚ್ಚಳಿಕೆಯನ್ನು ಪಡೆಯತಕ್ಕದ್ದು.

**"ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ"**

ಜಂಟಿ ನಿರ್ದೇಶಕರು(ಆಡಳಿತ),
ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು

ಇವರಿಗೆ:

ತಾಂತ್ರಿಕ ಶಿಕ್ಷಣ ಇಲಾಖೆಯ ಸಂಬಂಧಿಸಿದ ಎಲ್ಲಾ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಪ್ರಾಂಶುಪಾಲರಿಗೆ(ಮಾಹಿತಿ ಮತ್ತು ಮುಂದಿನ ಕ್ರಮಕ್ಕಾಗಿ)

ಪ್ರತಿ:

1. ಡಿವಿಪಿ ವಿಭಾಗ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು;
2. ನೋಡಲ್ ಅಧಿಕಾರಿ, ಇ-ಆಡಳಿತ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು
3. ಕಛೇರಿ ಪ್ರತಿ.